Email: kolardccb@yahoo.com phone: 08152-222042

# ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಕೋಲಾರ

(ಅಂಚೆ ಪೆಟ್ಟಿಗೆ ಸಂಖ್ಯೆ 11, ಡಿ.ಸಿ.ಸಿ. ಬ್ಯಾಂಕ್ ರಸ್ತೆ, ಕೋಲಾರ)

ಸಂಖ್ಯೆ: ಕೋಚಿಡಿಸಿಸಿಬಿ/ಆ ಮತ್ತು ಸಿ/ ನೇರ ನೇಮಕಾತಿ/ :2022-23 18205 ದಿ28/02/2023.

## ನೇಮಕಾತಿ ಪ್ರಕಟಣೆ

ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳನ್ನು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಹಾಗೂ ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960, ಬ್ಯಾಂಕಿನ ಉಪವಿಧಿ ಮತ್ತು ಸಿಬ್ಬಂದಿ ಸೇವಾ ನಿಯಮಗಳಲ್ಲಿನ ಅವಕಾಶಗಳಿಗೊಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ONLINE (ಅಂತರ್ಜಾಲದ ತಾಂತ್ರಿಕ ಸೇವೆಯ) ಮುಖಾಂತರ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಸಕ್ತಿಯುಳ್ಳ ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ https://virtualofficeerp.com/kcdccb_2023/ ರಲ್ಲಿ ನೀಡಿರುವ ಲಿಂಕ್ ಮುಖಾಂತರ ಅರ್ಜಿಯನ್ನು ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಕಳುಹಿಸಲು ಅವಕಾಶವಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಿದೆ. ನೇಮಕಾತಿ ಮಾಡಲು ಉದ್ದೇಶಿಸಿರುವ ವಿವಿಧ ವೃಂದಗಳ ಒಟ್ಟು 36 ಹುದ್ದೆಗಳನ್ನು (ಬ್ಯಾಕ್ ಲಾಗ್ ಹುದ್ದೆಯೂ ಸೇರಿದಂತೆ) ಈ ಕೆಳಗಿನಂತೆ ವರ್ಗೀಕರಿಸಿ ಮೀಸಲಿರಿಸಲಾಗಿದೆ. ಕರ್ನಾಟಕ ಸರ್ಕಾರದ ಸಹಕಾರ ಇಲಾಖೆಯ ಮಾನ್ಯ ಸಹಕಾರ ಸಂಘಗಳ ಅಪರ ನಿಬಂಧಕರು (ಪತ್ತು) ಇವರ ಆದೇಶ ಸಂಖ್ಯೆ : ಆರ್‌ಸಿಎಸ್ / ಸಿಆರ್‌ಡಿ / ಸಿಎಬಿ – 5/ 13 / 2022–23, ದಿನಾಂಕ 27.06.2022 ರನ್ವಯ ಸಿಬ್ಬಂದಿ ನೇರ ನೇಮಕಾತಿಗೆ ಅನುಮತಿ ಪಡೆಯಲಾಗಿದೆ.

## 1. ಹುದ್ದೆಗಳ ವಿವರ :

### (1)ಹುದ್ದೆ: ಲೆಕ್ಕಿಗರು : ಒಟ್ಟು ಹುದ್ದೆಗಳ ಸಂಖ್ಯೆ: 09 (ಒಂಬತ್ತು ಹುದ್ದೆಗಳು)

**ವೇತನ ಶ್ರೇಣಿ: ರೂ** 36000–950–39800–1100–46400–1250–53900–1450–62600–1650–67550 **ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು**

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ ದೃಷ್ಟಿ ಮಾಂದ್ಯತೆ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗ |
|---|---|---|---|---|---|---|---|---|---|
| ಸಾಮಾನ್ಯ | 04 | 01 | 01 | 01 | 01 Blindness or low vision | - | - | - | - |
| ಪರಿಶಿಷ್ಟ ಜಾತಿ | 02 | 01 | 01 | - | - | - | - | - | - |
| ಪರಿಶಿಷ್ಟ ಪಂಗಡ | 01 | 01 | - | - | - | - | - | - | - |
| ಪ್ರವರ್ಗ–I | 01 | 01 | - | - | - | - | - | - | - |
| ಪ್ರವರ್ಗ II (ಎ) | 01 | 01 | - | - | - | - | - | - | - |
| ಪ್ರವರ್ಗ II (ಬಿ) | - | - | - | - | - | - | - | - | - |
| ಪ್ರವರ್ಗ III (ಎ) | - | - | - | - | - | - | - | - | - |
| ಪ್ರವರ್ಗ III(ಬಿ) | - | - | - | - | - | - | - | - | - |
| ಒಟ್ಟು | **09** | **05** | **02** | **01** | **01** | - | - | - | - |

The Kolar & Chickballapura D.C.C. Bank ltd. Reg.No. ARK-492 Dt:-24-12-1954 Kolar.

(2)ಹುದ್ದೆ: ಹಿರಿಯ ಸಹಾಯಕರು : ಒಟ್ಟು ಹುದ್ದೆಗಳ ಸಂಖ್ಯೆ: 13 (ಹದಿಮೂರು ಹುದ್ದೆಗಳು)

ವೇತನ ಶ್ರೇಣಿ: ರೂ 33450–850–36000–950–39800–1100–46400–1250–53900–1450–62600 ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ ದೃಷ್ಟಿ ಮಾಂದ್ಯತೆ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗ |
|---|---|---|---|---|---|---|---|---|---|
| ಸಾಮಾನ್ಯ | 06 | 01 | 02 | 02 | 01 Blindness or low vision | - | - | - | - |
| ಪರಿಶಿಷ್ಟ ಜಾತಿ | 02 | 01 | 01 | - | - | - | - | - | - |
| ಪರಿಶಿಷ್ಟ ಪಂಗಡ | 01 | 01 | - | - | - | - | - | - | - |
| ಪ್ರವರ್ಗ–1 | 01 | 01 | - | - | - | - | - | - | - |
| ಪ್ರವರ್ಗ II (ಎ) | 02 | 01 | 01 | - | - | - | - | - | - |
| ಪ್ರವರ್ಗ II (ಬಿ) | 01 | 01 | - | - | - | - | - | - | - |
| ಪ್ರವರ್ಗ III (ಎ) | - | - | - | - | - | - | - | - | - |
| ಪ್ರವರ್ಗ III(ಬಿ) | - | - | - | - | - | - | - | - | - |
| ಒಟ್ಟು | **13** | **06** | **04** | **02** | **01** | - | - | - | - |

(3)ಹುದ್ದೆ: ವಾಹನ ಚಾಲಕರು : ಒಟ್ಟು ಹುದ್ದೆಗಳ ಸಂಖ್ಯೆ: 03 ( ಮೂರು ಹುದ್ದೆಗಳು )

ವೇತನ ಶ್ರೇಣಿ: ರೂ **27650–650–29600–750–32600–850–36000–950–39800–1100–46400–1250–52650** ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗ |
|---|---|---|---|---|---|---|---|---|---|
| ಸಾಮಾನ್ಯ | 01 | 01 | - | - | - | - | - | - | - |
| ಪರಿಶಿಷ್ಟ ಜಾತಿ | 01 | 01 | - | - | - | - | - | - | - |
| ಪರಿಶಿಷ್ಟ ಪಂಗಡ | 01 | 01 | - | - | - | - | - | - | - |
| ಪ್ರವರ್ಗ–1 | - | - | - | - | - | - | - | - | - |
| ಪ್ರವರ್ಗ II (ಎ) | - | - | - | - | - | - | - | - | - |
| ಪ್ರವರ್ಗ II (ಬಿ) | - | - | - | - | - | - | - | - | - |
| ಪ್ರವರ್ಗ III (ಎ) | - | - | - | - | - | - | - | - | - |
| ಪ್ರವರ್ಗ III(ಬಿ) | - | - | - | - | - | - | - | - | - |
| ಒಟ್ಟು | **03** | **03** | - | - | - | - | - | - | - |

The Kolar & Chickballapura D.C.C. Bank ltd. Reg.No. ARK-492 Dt:-24-12-1954 Kolar.

(4) ಹುದ್ದೆ: ಜವಾನರು : ಒಟ್ಟು ಹುದ್ದೆಗಳ ಸಂಖ್ಯೆ: 10 (ಹತ್ತು ಹುದ್ದೆಗಳು)

ವೇತನ ಶ್ರೇಣಿ: ರೂ 23500-550-24600-600-27000-650-29600-750-32600-850-36000-950-39800-1100-46400-1250-47650 ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ ದೃಷ್ಟಿ ಮಾಂದ್ಯತೆ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗ |
|---|---|---|---|---|---|---|---|---|---|
| ಸಾಮಾನ್ಯ | 05 | 01 | 02 | 01 | 01 Blindness or low vision | - | - | - | - |
| ಪರಿಶಿಷ್ಟ ಜಾತಿ | 02 | 01 | 01 | - | - | - | - | - | - |
| ಪರಿಶಿಷ್ಟ ಪಂಗಡ | 01 | 01 | - | - | - | - | - | - | - |
| ಪ್ರವರ್ಗ-I | 01 | 01 | - | - | - | - | - | - | - |
| ಪ್ರವರ್ಗ II (ಎ) | 01 | 01 | - | - | - | - | - | - | - |
| ಪ್ರವರ್ಗ II (ಬಿ) | - | - | - | - | - | - | - | - | - |
| ಪ್ರವರ್ಗ III (ಎ) | - | - | - | - | - | - | - | - | - |
| ಪ್ರವರ್ಗ III(ಬಿ) | - | - | - | - | - | - | - | - | - |
| ಒಟ್ಟು | 10 | 05 | 03 | 01 | 01 | - | - | - | - |

ಬ್ಯಾಕ್ ಲಾಗ್ ಹುದ್ದೆ: ಹಿರಿಯ ಸಹಾಯಕರು : ಒಟ್ಟು ಹುದ್ದೆಗಳ ಸಂಖ್ಯೆ: 01 ( ಒಂದು ಹುದ್ದೆ )
ವೇತನ ಶ್ರೇಣಿ: ರೂ 33450-850-36000-950-39800-1100-46400-1250-53900-1450-62600 ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ ದೃಷ್ಟಿ ಮಾಂದ್ಯತೆ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗ |
|---|---|---|---|---|---|---|---|---|---|
| ಸಾಮಾನ್ಯ | - | - | - | - | - | - | - | - | - |
| ಪರಿಶಿಷ್ಟ ಜಾತಿ | - | - | - | - | - | - | - | - | - |
| ಪರಿಶಿಷ್ಟ ಪಂಗಡ | - | - | - | - | - | - | - | - | - |
| ಪ್ರವರ್ಗ-I | - | - | - | - | - | - | - | - | - |
| ಪ್ರವರ್ಗ II (ಎ) | 01 | - | - | - | 01 Blindness or low vision | - | - | - | - |
| ಪ್ರವರ್ಗ II (ಬಿ) | - | - | - | - | - | - | - | - | - |
| ಪ್ರವರ್ಗ III (ಎ) | - | - | - | - | - | - | - | - | - |
| ಪ್ರವರ್ಗ III(ಬಿ) | - | - | - | - | - | - | - | - | - |
| ಒಟ್ಟು | 01 | - | - | - | 01 | - | - | - | - |

The Kolar & Chickballapura D.C.C. Bank Ltd. Reg.No. ARK-492 Dt:-24-12-1954 Kolar.

## 2. ವಯೋಮಿತಿ:

ಅರ್ಜಿಗಳನ್ನು ಭರ್ತಿ ಮಾಡಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಈ ಕೆಳಗೆ ತಿಳಿಸಿರುವಂತೆ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗಧಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ವರ್ಗೀಕರಣದ ವಿವರ | ಕನಿಷ್ಠ | ಗರಿಷ್ಠ |
|---|---|---|
| ಸಾಮಾನ್ಯ ವರ್ಗ | 18 | 35 |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ) | 18 | 38 |
| ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ-1 | 18 | 40 |

ಈ ಕೆಳಗಿನ ಸಂಧರ್ಭಗಳಲ್ಲಿ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು

(ಎ) ಮಾಜಿ ಸೈನಿಕ ಅಭ್ಯರ್ಥಿಗೆ ಸರ್ಕಾರದ ಆದೇಶಾನುಸಾರ " ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು" ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(ಬಿ) ದೈಹಿಕ ಅಂಗವಿಕಲತೆ ಹೊಂದಿದ ಅಭ್ಯರ್ಥಿಗೆ ೧೦ (ಹತ್ತು) ವರ್ಷ

(ಸಿ) ವಿಧವೆ ಅಭ್ಯರ್ಥಿಗೆ ೧೦ (ಹತ್ತು) ವರ್ಷ

## 3.ಶೈಕ್ಷಣಿಕ ವಿದ್ಯಾರ್ಹತೆ:

ಅರ್ಜಿಗಳನ್ನು ಭರ್ತಿ ಮಾಡಲು ನಿಗಧಿಪಡಿಸಿರುವ ಕೊನೆಯ ದಿನಾಂಕದಂದಿಗೆ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರತಕ್ಕದ್ದು. ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದು ಇದರ ಆಧಾರದ ಮೇಲೆ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

### (1)ಹುದ್ದೆ : ಲೆಕ್ಕಿಗರು

ಭಾರತದ ಕಾನೂನಿನನ್ವಯ ಸ್ಥಾಪಿಸಲ್ಪಟ್ಟ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾನಿಲಯದ ಯಾವುದೇ ಪದವಿಯಲ್ಲಿ ತೇರ್ಗಡೆಯಾಗಿರಬೇಕು. ಕಂಪ್ಯೂಟರ್ ಆಪರೇಷನ್ಸ್ ಮತ್ತು ಅಪ್ಲಿಕೇಷನ್ ಜ್ಞಾನದ ಜೊತೆಗೆ ಟ್ಯಾಲಿ ಕೋರ್ಸ್‌ನ ತೇರ್ಗಡೆ ಪತ್ರವನ್ನು ಹೊಂದಿರಬೇಕು. ಕನ್ನಡವನ್ನು ಓದುವ ಮತ್ತು ಬರೆಯುವ ಸಾಮರ್ಥ್ಯದ ಜೊತೆಗೆ ಕನ್ನಡವನ್ನು ಸ್ಪಷ್ಟವಾಗಿ ಮಾತನಾಡುವ ಮತ್ತು ಅರ್ಥ ಮಾಡಿಕೊಳ್ಳುವ ಸಾಮರ್ಥ್ಯ ಹೊಂದಿರಬೇಕು.

(2)ಹುದ್ದೆ : ಹಿರಿಯ ಸಹಾಯಕರು

ಭಾರತದ ಕಾನೂನಿನನ್ವಯ ಸ್ಥಾಪಿಸಲ್ಪಟ್ಟ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾನಿಲಯದ ಯಾವುದೇ ಪದವಿಯಲ್ಲಿ ತೇರ್ಗಡೆಯಾಗಿರಬೇಕು. ಕಂಪ್ಯೂಟರ್ ಆಪರೇಷನ್ಸ್ ಮತ್ತು ಅಪ್ಲಿಕೇಷನ್ ಜ್ಞಾನದ ಜೊತೆಗೆ ಟ್ಯಾಲಿ ಕೋರ್ಸ್‌ನ ತೇರ್ಗಡೆ ಪತ್ರವನ್ನು ಹೊಂದಿರಬೇಕು. ಕನ್ನಡವನ್ನು ಓದುವ ಮತ್ತು ಬರೆಯುವ ಸಾಮರ್ಥ್ಯದ ಜೊತೆಗೆ ಕನ್ನಡವನ್ನು ಸ್ಪಷ್ಟವಾಗಿ ಮಾತನಾಡುವ ಮತ್ತು ಅರ್ಥ ಮಾಡಿಕೊಳ್ಳುವ ಸಾಮರ್ಥ್ಯ ಹೊಂದಿರಬೇಕು.

(3)ಹುದ್ದೆ : ವಾಹನ ಚಾಲಕರು:

ಎಸ್.ಎಸ್.ಎಲ್.ಸಿ (ಹತ್ತನೇ ತರಗತಿ) ಯಲ್ಲಿ ಉತ್ತೀರ್ಣರಾಗಿದ್ದು ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು. ಕಾನೂನಿನನ್ವಯ ಲಘು ವಾಹನ ಚಾಲನೆ ಪರವಾನಿಗೆ ಹೊಂದಿರಬೇಕು.

(4)ಹುದ್ದೆ : ಜವಾನರು :

ಎಸ್.ಎಸ್.ಎಲ್.ಸಿ (ಹತ್ತನೇ ತರಗತಿ) ಯಲ್ಲಿ ಉತ್ತೀರ್ಣರಾಗಿದ್ದು ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು.

## 4. ಅರ್ಜಿ ಶುಲ್ಕ :

| ಕ್ರಮ ಸಂಖ್ಯೆ | ವಿವರ | ಅರ್ಜಿ ಶುಲ್ಕ |
|---|---|---|
| 1 | ಸಾಮಾನ್ಯ ಮತ್ತು ಇತರೆ ವರ್ಗದ ಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ. | ರೂ. 1000/- |
| 2 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಅಂಗವಿಕಲ, ಮಾಜಿ ಸೈನಿಕ ಹಾಗೂ ವಿಧವೆ ಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ. | ರೂ. 500/- |

ಅರ್ಜಿ ಶುಲ್ಕವನ್ನು

- **Payment using Net Banking, credit card, Debit card, UPI** ಮುಖಾಂತರ ಪೇಮೆಂಟ್ ಗೇಟ್ವೆ ಶುಲ್ಕವನ್ನು ಪಾವತಿಸಿ ಅರ್ಜಿ ಶುಲ್ಕ ಪಾವತಿ ಮಾಡತಕ್ಕದ್ದು. ಶುಲ್ಕವನ್ನು ಪಾವತಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ 16.03.2023 ರ ರಾತ್ರಿ 11.59 ರ ಒಳಗಾಗಿ ಪಾವತಿಸತಕ್ಕದ್ದು.
- ನಿರ್ದಿಷ್ಟ ಅವಧಿ ಕೊನೆಗೊಂಡ ನಂತರ ಅರ್ಜಿ ಶುಲ್ಕ ಪಾವತಿಗೆ ಅವಕಾಶ ಇರುವುದಿಲ್ಲ. ಅರ್ಜಿ ಶುಲ್ಕವನ್ನು ನಿಗಧಿಪಡಿಸಿದ ದಿನಾಂಕ, ಸಮಯದೊಳಗಾಗಿ ಸಲ್ಲಿಸದೇ ಇರುವಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

The Kolar & Chickballapura D.C.C. Bank Ltd. Reg.No. ARK-492 Dt: 24-12-1954 Kolar.

ಡಿಡಿ / ಪೋಸ್ಟಲ್ ಆರ್ಡರ್/ ಮನಿಯಾರ್ಡರ್ ಮುಖಾಂತರ ಅರ್ಜಿ ಶುಲ್ಕ ಸಂದಾಯ ಮಾಡಿದಲ್ಲಿ ಅಂತಹ ಶುಲ್ಕವನ್ನು ಸ್ವೀಕರಿಸದೆ ತಿರಸ್ಕರಿಸಲಾಗುವುದು ಮತ್ತು ಅಂತಹ ಅಭ್ಯರ್ಥಿಯ ಅರ್ಜಿಯನ್ನು ಶುಲ್ಕ ಸಂದಾಯ ಮಾಡದ ಅರ್ಜಿ ಎಂದು ಪರಿಗಣಿಸಲಾಗುವುದು.

## 5. ನಿಗಧಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಗೆ ಮತ್ತು ಅರ್ಜಿ ಶುಲ್ಕ ಪಾವತಿಗೆ ನಿಗಧಿಪಡಿಸಿರುವ ಕಾಲಾವಧಿ :

| | |
|---|---|
| ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಪ್ರಾರಂಭಿಕ ದಿನಾಂಕ | 02-03-2023 |
| ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 16-03-2023 |
| ಅರ್ಜಿ ಶುಲ್ಕ ಪಾವತಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 16-03-2023 |

## 6. ಆಯ್ಕೆ ವಿಧಾನ:

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 18 (ಸಿ), (ಇ), (ಎಫ್) ಮತ್ತು (ಜಿ) ರಲ್ಲಿ ತಿಳಿಸಿರುವ ವಿಧಿ ವಿಧಾನಗಳನ್ನು ಮತ್ತು ಇಲಾಖೆಯಿಂದ ನೀಡಿರುವ ಮಾರ್ಗಸೂಚಿಗಳನ್ನು ಪಾಲನೆ ಮಾಡಿ ಅರ್ಹ ಅಭ್ಯರ್ಥಿಗಳನ್ನು ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲಾಗುವುದು.

**(1)ಲೆಕ್ಕಿಗರ ಹುದ್ದೆ:** ಈ ಹುದ್ದೆಗೆ ಅರ್ಹ ಅಭ್ಯರ್ಥಿಗಳನ್ನು ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

- ಲೆಕ್ಕಿಗರ ಹುದ್ದೆಗೆ ನಿಗಧಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಉತ್ತೀರ್ಣರಾಗಿದ್ದಲ್ಲಿ ಮತ್ತು ಗರಿಷ್ಠ ವಯೋಮಿತಿ ಮೀರದಿದ್ದಲ್ಲಿ ಅಂತಹ ಎಲ್ಲಾ ಅರ್ಹ ಅಭ್ಯರ್ಥಿಗಳನ್ನು ಲಿಖಿತ ಪರೀಕ್ಷೆಗೆ ಕರೆಯಲಾಗುವುದು
- ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ 200 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | |
|---|---|
| ಕನ್ನಡ ಭಾಷೆ | 50 ಅಂಕಗಳು |
| ಸಾಮಾನ್ಯ ಆಂಗ್ಲ ಭಾಷೆ | 25 ಅಂಕಗಳು |
| ಸಾಮಾನ್ಯ ಜ್ಞಾನ | 25 ಅಂಕಗಳು |
| ಸಹಕಾರ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳು | 50 ಅಂಕಗಳು |
| ಭಾರತ ಸಂವಿಧಾನಕ್ಕೆ ಸಂಬಂಧಿಸಿದ ವಿಷಯಗಳು | 25 ಅಂಕಗಳು |
| ಸಮಾಜದ ಯುಕ್ತವಾದ ಚಟುವಟಿಕೆಗಳು ಮತ್ತು ವಸ್ತುನಿಷ್ಠ ವಿಷಯ ವಸ್ತುಗಳು | 25 ಅಂಕಗಳು |
| ಒಟ್ಟು | 200 ಅಂಕಗಳು |

The Kolar & Chickballapura D.C.C. Bank Ltd. Reg. No. ARK-492 Dt: 24-12-1954 Kolar.

- ಲಿಖಿತ ಪರೀಕ್ಷೆಯನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಸಮಿತಿಯಿಂದ ಆಯ್ಕೆ ಮಾಡಲಿರುವ ಬಾಹ್ಯಮೂಲ ಸಂಸ್ಥೆಯಿಂದ ನಡೆಸಲಾಗುವುದು ಮತ್ತು ಉತ್ತರ ಪತ್ರಿಕೆಯ ಮೌಲ್ಯ ಮಾಪನವನ್ನು ಲಿಖಿತ ಪರೀಕ್ಷೆ ನಡೆಸಿದ ಬಾಹ್ಯ ಮೂಲ ಸಂಸ್ಥೆಯಿಂದಲೇ ಮಾಡಿಸಲಾಗುವುದು.
- ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಆಯ್ಕೆ ಸಮಿತಿಯಿಂದ ನಡೆಸಲಾಗುವುದು.
- ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85 ಕ್ಕೆ ನಿಗಧಿಪಡಿಸಿ ಪ್ರಾಪ್ತವಾಗುವ ಅಂಕಗಳ ಆಧಾರದ ಮೇಲೆ ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಅರ್ಹ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. **ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿಪಡಿಸಲಾಗಿರುತ್ತದೆ.**
- ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ಮಾನ್ಯ ನಿಬಂಧಕರ ಸುತ್ತೋಲೆ ಸಂಖ್ಯೆ: ಆರ್.ಸಿ.ಎಸ್ / ಆರ್.ಎಸ್.ಆರ್ / ಎಕ್ಸ್ ಎಂಸಿ / 41 / 2020-21 ದಿನಾಂಕ 16.09.2020 ನ್ನು ಪಾಲನೆ ಮಾಡುವ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುವುದು.

**(2) ಹಿರಿಯ ಸಹಾಯಕರ ಹುದ್ದೆ:** ಈ ಹುದ್ದೆಗೆ ಅರ್ಹ ಅಭ್ಯರ್ಥಿಗಳನ್ನು ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

- ಹಿರಿಯ ಸಹಾಯಕರ ಹುದ್ದೆಗೆ ನಿಗಧಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಉತ್ತೀರ್ಣರಾಗಿದ್ದಲ್ಲಿ ಮತ್ತು ಗರಿಷ್ಠ ವಯೋಮಿತಿ ಮೀರದಿದ್ದಲ್ಲಿ ಅಂತಹ ಎಲ್ಲಾ ಅರ್ಹ ಅಭ್ಯರ್ಥಿಗಳನ್ನು ಲಿಖಿತ ಪರೀಕ್ಷೆಗೆ ಕರೆಯಲಾಗುವುದು
- ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ 200 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | |
|---|---|
| ಕನ್ನಡ ಭಾಷೆ | 50 ಅಂಕಗಳು |
| ಸಾಮಾನ್ಯ ಆಂಗ್ಲ ಭಾಷೆ | 25 ಅಂಕಗಳು |
| ಸಾಮಾನ್ಯ ಜ್ಞಾನ | 25 ಅಂಕಗಳು |
| ಸಹಕಾರ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳು | 50 ಅಂಕಗಳು |
| ಭಾರತ ಸಂವಿಧಾನಕ್ಕೆ ಸಂಬಂಧಿಸಿದ ವಿಷಯಗಳು | 25 ಅಂಕಗಳು |
| ಸಮಾಜದ ಯುಕ್ತವಾದ ಚಟುವಟಿಕೆಗಳು ಮತ್ತು ವಸ್ತುನಿಷ್ಠ ವಿಷಯ ವಸ್ತುಗಳು | 25 ಅಂಕಗಳು |
| ಒಟ್ಟು | 200 ಅಂಕಗಳು |

- ಲಿಖಿತ ಪರೀಕ್ಷೆಯನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಸಮಿತಿಯಿಂದ ಆಯ್ಕೆ ಮಾಡಲಿರುವ ಬಾಹ್ಯಮೂಲ ಸಂಸ್ಥೆಯಿಂದ ನಡೆಸಲಾಗುವುದು ಮತ್ತು ಉತ್ತರ ಪತ್ರಿಕೆಯ ಮೌಲ್ಯ ಮಾಪನವನ್ನು ಲಿಖಿತ ಪರೀಕ್ಷೆ ನಡೆಸಿದ ಬಾಹ್ಯ ಮೂಲ ಸಂಸ್ಥೆಯಿಂದಲೇ ಮಾಡಿಸಲಾಗುವುದು.

The Kolar & Chickballapura D.C.C. Bank ltd. Reg.No. ARK-492 Dt:-24-12-1954 Kolar.

- ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಆಯ್ಕೆ ಸಮಿತಿಯಿಂದ ನಡೆಸಲಾಗುವುದು.
- ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85 ಕ್ಕೆ ನಿಗಧಿಪಡಿಸಿ ಪ್ರಾಪ್ತವಾಗುವ ಅಂಕಗಳ ಆಧಾರದ ಮೇಲೆ ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಅರ್ಹ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. **ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿಪಡಿಸಲಾಗಿರುತ್ತದೆ.**
- ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ಮಾನ್ಯ ನಿಬಂಧಕರ ಸುತ್ತೋಲೆ ಸಂಖ್ಯೆ: ಆರ್.ಸಿ.ಎಸ್ / ಆರ್.ಎಸ್.ಆರ್ / ಎಕ್ಸ್ ಎಂಸಿ / 41 / 2020-21 ದಿನಾಂಕ 16.09.2020 ನ್ನು ಪಾಲನೆ ಮಾಡುವ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುವುದು.

<u>**(3)ವಾಹನ ಚಾಲಕರ ಹುದ್ದೆ**</u>: ಈ ಹುದ್ದೆಗೆ ಅರ್ಹ ಅಭ್ಯರ್ಥಿಗಳನ್ನು ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

- ಬ್ಯಾಂಕಿಗೆ ಬರುವ ಒಟ್ಟು ಅರ್ಜಿಗಳನ್ನು ಪರಿಶೀಲಿಸಿ, ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಪಡೆದ ಅಂಕಗಳ ಜೇಷ್ಠತಾ ಆಧಾರದ ಮೇಲೆ ಒಟ್ಟು ಖಾಲಿ ಹುದ್ದೆಗಳ ಸಂಖ್ಯೆಗೆ ಅರ್ಹತಾ ಪಟ್ಟಿಯನ್ನು ತಯಾರಿಸಿ **1 : 5** ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ವಾಹನ ಚಾಲನಾ ಪರೀಕ್ಷೆಗೆ ಕರೆಯಲಾಗುವುದು.
- ಸಂದರ್ಶನಕ್ಕೆ ನಿಗದಿಪಡಿಸಲಾದ ಅಂಕಗಳು **15** ಮತ್ತು ವಾಹನ ಚಾಲನೆಯ ಪ್ರವೀಣತೆಯ ಪರೀಕ್ಷೆಗೆ ನಿಗದಿಪಡಿಸಲಾದ ಅಂಕಗಳು 30.
- ವಾಹನ ಚಾಲನಾ ಪ್ರವೀಣತಾ ಪರೀಕ್ಷೆಯನ್ನು ಪ್ರಾದೇಶಿಕ ಸಾರಿಗೆ ಇಲಾಖೆ ವತಿಯಿಂದ ನಡೆಸಲಾಗುವುದು.
- ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಆಯ್ಕೆ ಸಮಿತಿಯಿಂದ ನಡೆಸಲಾಗುವುದು.
- ವಾಹನ ಚಾಲನೆಯ ಪ್ರವೀಣತೆಯ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85 ಕ್ಕೆ ಇಳಿಸಿ ಜೊತೆಗೆ ಮೌಖಿಕ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ಮಾನ್ಯ ನಿಬಂಧಕರ ಸುತ್ತೋಲೆ ಸಂಖ್ಯೆ: ಆರ್.ಸಿ.ಎಸ್ / ಆರ್.ಎಸ್.ಆರ್ / ಎಕ್ಸ್ ಎಂಸಿ / 41 / 2020-21 ದಿನಾಂಕ 16.09.2020 ನ್ನು ಪಾಲನೆ ಮಾಡುವ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುವುದು.

The Kolar & Chickballapura D.C.C. Bank ltd. Reg.No. ARK-492 Dt:-24-12-1954 Kolar.

(4) **ಜವಾನರ ಹುದ್ದೆ:** ಈ ಹುದ್ದೆಗೆ ಅರ್ಹ ಅಭ್ಯರ್ಥಿಗಳನ್ನು ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

- ಬ್ಯಾಂಕಿಗೆ ಬರುವ ಒಟ್ಟು ಅರ್ಜಿಗಳನ್ನು ಪರಿಶೀಲಿಸಿ, ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಪಡೆದ ಅಂಕಗಳ ಜೇಷ್ಠತಾ ಆಧಾರದ ಮೇಲೆ ಒಟ್ಟು ಖಾಲಿ ಹುದ್ದೆಗಳ ಸಂಖ್ಯೆಗೆ ಅರ್ಹತಾ ಪಟ್ಟಿಯನ್ನು ತಯಾರಿಸಿ, **1 : 5** ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.
- ಸಂದರ್ಶನಕ್ಕೆ ನಿಗದಿಪಡಿಸಲಾದ ಅಂಕಗಳು **15.**
- ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಸಮಿತಿಯಿಂದ ನಡೆಸಲಾಗುವುದು.
- ಎಸ್.ಎಸ್.ಎಲ್.ಸಿ.ಯಲ್ಲಿ ಪಡೆದ ಅಂಕಗಳ ಶೇಕಡಾವಾರು ಪ್ರಮಾಣವನ್ನು ಶೇಕಡ **85** ಕ್ಕೆ ಇಳಿಸಿ, ಪ್ರಾಪ್ತವಾಗುವ ಅಂಕಗಳ ಶೇಕಡಾವಾರು ಪ್ರಮಾಣದ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ, ಅರ್ಹತಾ ಪಟ್ಟಿಯನ್ನು (Merit List) ತಯಾರಿಸಿ ಮೀಸಲಾತಿ ನಿಯಮಗಳನ್ನು ಅನುಸರಿಸಿ, ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ಮಾನ್ಯ ನಿಬಂಧಕರ ಸುತ್ತೋಲೆ ಸಂಖ್ಯೆ: ಆರ್.ಸಿ.ಎಸ್ / ಆರ್.ಎಸ್.ಆರ್ / ಎಕ್ಸ್ ಎಂಸಿ / 41 / 2020–21 ದಿನಾಂಕ 16.09.2020 ನ್ನು ಪಾಲನೆ ಮಾಡುವ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುವುದು.

## 7. ಅರ್ಜಿ ಸಲ್ಲಿಸುವಿಕೆಯ ವಿಧಾನ:

ಅಭ್ಯರ್ಥಿಗಳು **ONLINE** ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

ಹಂತ :(1): ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ https://virtualofficeerp.com/kcdccb_2023/ ಅನ್ನು ತೆರೆದ ಕೂಡಲೆ ಕಂಪ್ಯೂಟರ್ ಪರದೆಯ ಮೇಲೆ **'K & C DCC BANK RECRUITMENT 2023'** ಎಂದು ಮೂಡುತ್ತದೆ. ಆನ್ ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಪೂರ್ವದಲ್ಲಿ ಅಧಿಸೂಚನೆ / ಸೂಚನೆಗಳನ್ನು ಕಡ್ಡಾಯವಾಗಿ ಓದತಕ್ಕದ್ದು ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್ ಬಾಕ್ಸ್ ಅನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಮತ್ತು **New Registration** ಗುಂಡಿಯನ್ನು ಒತ್ತಿ ಮುಂದುವರಿಯಿರಿ.

ಹಂತ: 2: ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ Apply ಗುಂಡಿಯನ್ನು ಒತ್ತಿ ಅರ್ಜಿಯನ್ನು ಭರ್ತಿಮಾಡತಕ್ಕದ್ದು. ಅರ್ಜಿಯನ್ನು ಭರ್ತಿಮಾಡಿದ ನಂತರ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತಪಡಿಸಿಕೊಂಡ ನಂತರ Preview ಗುಂಡಿಯನ್ನು ಒತ್ತಿ ಮುಂದುವರಿಯಿರಿ.


ಹಂತ: 3: ಅರ್ಜಿಯಲ್ಲಿ ಯಾವುದೇ ವಿವರಗಳ ಬದಲಾವಣೆ ಅಗತ್ಯವಿದ್ದರೆ ಪೂರ್ವದರ್ಶನ ಪುಟದಲ್ಲಿ Edit ಗುಂಡಿಯನ್ನು ಒತ್ತಿ. ನಿಮ್ಮ ಅರ್ಜಿಯಲ್ಲಿನ ವಿವರಗಳು ಸರಿ ಇರುವುದನ್ನು ಖಚಿತಪಡಿಸಿಕೊಂಡು, ನಿಮ್ಮ ಸಹಿಯೊಂದಿಗಿನ ಪಾಸ್ ಪೋರ್ಟ್ ಗಾತ್ರದ ಸ್ಕ್ಯಾನ್ ಮಾಡಿದ ಭಾವಚಿತ್ರವನ್ನು ಅಪ್ ಲೋಡ್ ಮಾಡುವ ಬಗ್ಗೆ Next ಗುಂಡಿಯನ್ನು ಒತ್ತಿ.

The Kolar & Chickballapura D.C.C. Bank ltd. Reg.No. ARK-492 Dt:-24-12-1954 Kolar.

Note: ಈ ಹಂತದಲ್ಲಿ ಅಭ್ಯರ್ಥಿಯ ನೋಂದಾಯಿತ ಇಮೇಲ್ ವಿಳಾಸಕ್ಕೆ ಒಂದು ಸ್ವಯಂಚಾಲಿತ ಇಮೇಲ್ ಮೂಲಕ ಅವರ Registration Id ಮತ್ತು Password ಅನ್ನು ಕಳುಹಿಸಲಾಗುವುದು. ಅಭ್ಯರ್ಥಿಯು Edit Application ಗುಂಡಿಯನ್ನು ಒತ್ತಿ, ಅವರ Registration Id ಮತ್ತು Next Password ಅನ್ನು ಬಳಸಿ ತಮ್ಮ ವಿವರಗಳನ್ನು ಅಪ್ ಲೋಡ್ ಮಾಡಬಹುದು ಅಥವಾ ಅಪ್ ಲೋಡ್ ಮಾಡಿದ ಮಾಹಿತಿಯನ್ನು ಬದಲಾಯಿಸಬಹುದು.

ಹಂತ: 4: ನೀವು ಸ್ವಸಹಿಯೊಂದಿಗಿನ ಸ್ಕ್ಯಾನ್ ಮಾಡಿದ ಪಾಸ್ ಪೋರ್ಟ್ ಗಾತ್ರದ ಭಾವಚಿತ್ರವನ್ನು ಆಯ್ಕೆ ಮಾಡುವ ಬಗ್ಗೆ Browse ಗುಂಡಿಯನ್ನು ಒತ್ತಿ ಮತ್ತು ನಿಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಪೂರ್ವದರ್ಶನ ಮಾಡಲು Submit ಗುಂಡಿಯನ್ನು ಒತ್ತಿ ಒಂದು ವೇಳೆ ತಪ್ಪಾದ ಭಾವಚಿತ್ರವನ್ನು ಅಪ್ ಲೋಡ್ ಮಾಡಿದಲ್ಲಿ ಮೇಲಿನ ಕ್ರಮವನ್ನು ಪುನರಾವರ್ತಿಸಿ ಮುಂದಿನ ಪುಟದ ಬಗ್ಗೆ next ಗುಂಡಿಯನ್ನು ಒತ್ತಿದರೆ ಅರ್ಜಿಯಲ್ಲಿನ ಯಾವುದೇ ವಿವರವನ್ನು ಬದಲಾಯಿಸಲು ಸಾಧ್ಯವಿರುವುದಿಲ್ಲ.

ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಖಾಲಿ ಬಿಳಿ ಕಾಗದದ ಮೇಲೆ ಇರಿಸಿ, ಕಪ್ಪು ನಕ್ಷೆ/ಮಾರ್ಕರ್ ಪೆನ್ನಿನಿಂದ ಭಾವಚಿತ್ರದ ಸರಿ ಕೆಳಗೆ ಸಹಿ ಮಾಡಿರುವುದನ್ನು ಮತ್ತು ಅಂಕಣದೊಳಗೆ ಇರುವುದನ್ನು ಖಚಿತಪಡಿಸಿಕೊಳ್ಳುವುದು. **ಯಾವುದೇ ಕಾರಣಕ್ಕೂ ಭಾವ ಚಿತ್ರದ ಮೇಲೆ ಸಹಿ ಮಾಡಬಾರದು.**

| ಕಡತ ಗಾತ್ರ<100ಕೆ.ಬಿ | ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಅಳತೆ |
|---|---|
| ಡಿಪಿಐ ಸೆಟ್ಟಿಂಗ್ =100 ಡಿಪಿಐ |  |
| ಆಕೃತಿ ಪ್ರಮಾಣ =100% | |
| ಬಣ್ಣ | |
| ಜೆ ಪಿ ಜಿ/ಜೆ ಪಿ ಇ ಜಿ | |



ಅಭ್ಯರ್ಥಿಯ ಪಾಸ್‌ಪೋರ್ಟ್ ಭಾವಚಿತ್ರದ ಅಳತೆಗಳು : 45 ಎಂ.ಎಂ. (ಉದ್ದ) X 35 ಎಂ.ಎಂ. (ಅಗಲ)

ಅಭ್ಯರ್ಥಿಯ ಸಹಿ ಅಳತೆ : 20 ಎಂ.ಎಂ. (ಉದ್ದ) X 35 ಎಂ.ಎಂ. (ಅಗಲ)

The Kolar & Chickballapura D.C.C. Bank ltd. Reg.No. ARK-492 Dt:-24-12-1954 Kolar.

Note: ಅಭ್ಯರ್ಥಿಯು photo upload ಗುಂಡಿಯನ್ನು ಒತ್ತಿ, ಅವರ Registration Id ಮತ್ತು password ಅನ್ನು ಬಳಸಿ ತಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಅಪ್ ಲೋಡ್ ಮಾಡಬಹುದು ಅಥವಾ ತಪ್ಪಾದಲ್ಲಿ ಅದನ್ನು ಬದಲಾಯಿಸಬಹುದು. **ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್ ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.**

ಹಂತ: 5: ಅಭ್ಯರ್ಥಿಗಳು ಸಂಬಂಧಪಟ್ಟ ವಿದ್ಯಾರ್ಹತೆ, ಸೇವಾನುಭವ, ಮೀಸಲಾತಿ (ಜಾತಿ ಪ್ರಮಾಣ ಪತ್ರ, ಅಂಗವಿಕಲ ದೃಢೀಕರಣ ಪತ್ರ, ಕನ್ನಡ ಮಾಧ್ಯಮ, ಮಾಜಿ ಸೈನಿಕ, ಯೋಜನಾ ನಿರಾಶ್ರಿತ, ಗ್ರಾಮೀಣ ಪ್ರಮಾಣ ಪತ್ರ, ತೃತೀಯ ಲಿಂಗ ಪ್ರಮಾಣ ಪತ್ರ ಮತ್ತು ವಯೋಮಿತಿ) ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳನ್ನು ಸ್ವಯಂ ದೃಢೀಕರಿಸಿ (Self Attestation) ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರಗಳನ್ನು ಸ್ಕಾನ್ ಮಾಡಿ upload ಮಾಡತಕ್ಕದ್ದು. ಅಪೂರ್ಣವಾಗಿರುವ, ಫೋಟೋ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಹಂತ: 6: ಅರ್ಜಿಯ ಮುದ್ರಣವನ್ನು ಪಡೆಯಲು Print Application ಗುಂಡಿಯನ್ನು ಒತ್ತಿ ಅನಂತರವೇ Application Preview ಮೂಡಲಿದ್ದು, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ download ಮಾಡಿಕೊಳ್ಳತಕ್ಕದ್ದು. **K & C DCC BANK** ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು.

ಹಂತ: 7: ನಂತರ ಅರ್ಜಿ ಶುಲ್ಕ ಮತ್ತು ಅನ್ವಯಿಸುವ ಸೇವಾ ಶುಲ್ಕವನ್ನು **payment Gateway link** ಬಳಸಿ ಪಾವತಿಸತಕ್ಕದ್ದು.

**ವಿಶೇಷ ಸೂಚನೆ:**

- **ONLINE** ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (**Help Line**) **9036072155** ಅನ್ನು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.
- ಅಭ್ಯಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂಧರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.
- ಅಭ್ಯರ್ಥಿಗಳು ತಮ್ಮ ಅರ್ಜಿ ಸ್ಥಿತಿಯನ್ನು ತಿಳಿಯಬೇಕಾದಲ್ಲಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದ 7 ದಿನಗಳ ತರುವಾಯ ಬ್ಯಾಂಕಿನ ವೆಬ್‌ಸೈಟ್ **https://virtualofficeerp.com/kcdccb_2023/** ಲಿಂಕಿನಲ್ಲಿ ಮಾಹಿತಿಯನ್ನು ದಾಖಲಿಸಿ ಅರ್ಜಿಯು ಸಿಂಧುವಾಗಿರುವ ಬಗ್ಗೆ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ. ನಿಮ್ಮ ಅರ್ಜಿಯ ಮಾಹಿತಿ ಈ ಮೇಲೆ ಹೇಳಲಾದ ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ದೊರೆಯದಿದ್ದಲ್ಲಿ ನೀವು ಪಾವತಿಸಿದ ಶುಲ್ಕದ ವಿವರವುಳ್ಳ ಪ್ರತಿಯೊಂದಿಗೆ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕೋಲಾರ ಮತ್ತು ಚಿಕ್ಕಬಳ್ಳಾಪುರ ಡಿ.ಸಿ.ಸಿ. ಬ್ಯಾಂಕ್ ನಿ., ಕೋಲಾರ, ಡಿ.ಸಿ.ಸಿ. ಬ್ಯಾಂಕ್ ರಸ್ತೆ, ಕೋಲಾರ ಪಿನ್‌ಕೋಡ್ ಸಂಖ್ಯೆ : 563 101 ಈ ವಿಳಾಸದಲ್ಲಿರುವ ಬ್ಯಾಂಕಿನ ಕೇಂದ್ರ ಕಛೇರಿಯನ್ನು ಸಂಪರ್ಕಿಸಬಹುದು

The Kolar & Chickballapura D.C.C. Bank ltd. Reg.No. ARK-492 Dt.-24-12-1954 Kolar.

8. <u>ಸೂಚನೆಗಳು</u>

- ಬ್ಯಾಂಕಿನಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರಗಳನ್ನು ಬ್ಯಾಂಕಿನ ಜಾಲ ತಾಣದಿಂದ (WEBSITE) ಪಡೆದು ತಾಕ್ಷಣಿಕ ಸೇವೆಯ (ONLINE) ಮೂಲಕವೇ, ಸಲ್ಲಿಸತಕ್ಕದ್ದು.
- ಅನುಸೂಚಿಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.
- ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು.
- ಅರ್ಜಿ ನಮೂನೆಯನ್ನು ಬ್ಯಾಂಕಿನ ಜಾಲ ತಾಣದ ಮೂಲಕ ಡೌನ್ ಲೋಡ್ ಮಾಡಿಕೊಂಡು ಮುದ್ರಿಸಿ ಅಂಚೆ ಅಥವಾ ಇನ್ನಿತರೆ ಮಾಧ್ಯಮಗಳ ಮೂಲಕ ಸಲ್ಲಿಸಿದಲ್ಲಿ ಅವುಗಳನ್ನು ಗಣನೆಗೆ ತೆಗೆದುಕೊಳ್ಳದೆ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಅರ್ಜಿಗಳಲ್ಲಿ ಅಪೂರ್ಣ ಮಾಹಿತಿಗಳನ್ನು ನೀಡಿದ್ದಲ್ಲಿ ಅಂತಹ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳದೆ ತಿರಸ್ಕರಿಸಲಾಗುವುದು.
- ಬ್ಯಾಂಕಿನ ಸೂಚನೆಗಳನ್ನು ಅರಿಯದೆ ತಪ್ಪೆಸಗಿದಲ್ಲಿ ಬ್ಯಾಂಕು ಜವಾಬ್ದಾರರಾಗಿರುವುದಿಲ್ಲ.
- ನಿಗದಿತ ಶುಲ್ಕ ಸಂದಾಯ ಮಾಡದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.
- ಲಿಖಿತ ಪರೀಕ್ಷೆ ನಡೆಯುವ ಸ್ಥಳ, ದಿನಾಂಕ ಮತ್ತು ವೇಳೆ ಇವುಗಳ ವಿವರಗಳನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.

9. <u>ಅರ್ಹತಾ ಷರತ್ತುಗಳು:</u>

- ಭಾರತೀಯ ನಾಗರೀಕನಾಗಿರತಕ್ಕದ್ದು.
- ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ಇದ್ದಲ್ಲಿ, ನೇಮಕಾತಿಗೆ ಅರ್ಹರಾಗುವುದಿಲ್ಲ.
- ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
- ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ.
- ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

The Kolar & Chickballapura D.C.C. Bank ltd. Reg.No. ARK-492 Dt:-24-12-1954 Kolar.

10. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:-

ಮೀಸಲಾತಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:-

**ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:- ನಮೂನೆ 'ಡಿ'**

**ಆ) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು:- ನಮೂನೆ 'ಇ'**

**ಇ) ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು: ನಮೂನೆ 'ಎಫ್'**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಅಂದರೆ ತಹಶೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್ ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ -1 ರ ಮೀಸಲಾತಿ ಪ್ರಮಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗಧಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಳ್ಳತಕ್ಕದ್ದು. ಹಿಂದುಳಿದ ವರ್ಗಗಳ ಪ್ರವರ್ಗ -2ಎ, ಪ್ರವರ್ಗ - 2ಬಿ, ಪ್ರವರ್ಗ-3 ಎ ಮತ್ತು ಪ್ರವರ್ಗ - 3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು

ಅರ್ಜಿಯ ನಿಗದಿತ ಸ್ಥಳದಲ್ಲಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ನಮೂದಿಸತಕ್ಕದ್ದು ಹಾಗೂ ಅದೇ ಪ್ರಮಾಣ ಪತ್ರವನ್ನು ಸಂದರ್ಶನ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು.ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

11. ಮಾಜಿ ಸೈನಿಕರು ಅಥವಾ ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿ:-

ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ 01.04.1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್ ಆರ್ ಆರ್ 95 ದಿನಾಂಕ 21.10.1995 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ.

The Kolar & Chickballapura D.C.C. Bank ltd. Reg.No. ARK-492 Dt:-24-12-1954 Kolar.

(1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ ( ಯೋಧ ಅಥವಾ ಯೋಧನಲ್ಲದ ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನೀಯರಿಂಗ್ ಕೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು ( ಸಂಧರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು ) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವನು

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು

(1) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು

(2) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ

(3) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು

**ವಿವರಣೆ:**

**ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಮಾಜಿ ಸೈನಿಕರ ಅವಲಂಬಿತರು, ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೆ ಹಾಜರುಪಡಿಸಬೇಕು.**

The Kolar & Chickballapur D.C.C. Bank ltd. Reg.No. ARK-492 Dt:-24-12-1954 Kolar.

**12. ಗ್ರಾಮೀಣ ಅಭ್ಯರ್ಥಿ:-**

ಸರ್ಕಾರಿ ಅಧಿಸೂಚನೆ ಸಂಖ್ಯೆ : ಸಂವ್ಯ ಶಾಇ 59 ಶಾಸನ 2000, ದಿನಾಂಕ 06.01.2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿದ್ದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ 13.02.2001 ರನ್ವಯ ನಮೂನೆ –2ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ **"ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ"** ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ –2 ರಲ್ಲಿ **"ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ"**ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. **(ಅಭ್ಯರ್ಥಿಗಳ ಮಿಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ)** ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.

**13.ಅಂಗವಿಕಲ ಅಭ್ಯರ್ಥಿ:-**

ಸರ್ಕಾರವು ನೇರ ನೇಮಕಾತಿಗಳಿಗೆ ಅಂಗವಿಕಲ / ವಿಕಲ ಚೇತನರಿಗೆ ಸಮತಳ ಮೀಸಲಾತಿಯನ್ನು ಜಾರಿಗೊಳಿಸುವ ಸಂಬಂಧ ಸರ್ಕಾರವು ತನ್ನ ಆದೇಶ ಸಂಖ್ಯೆ ಸಿ.ಆ.ಸು.ಇ 149 ಎಸ್.ಆರ್.ಆರ್ 2020 ಬೆಂಗಳೂರು, ದಿನಾಂಕ 25.09.2020 ರಲ್ಲಿ ಮೀಸಲಾತಿ ಕಲ್ಪಿಸಿದೆ. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಅಸುಇ/115/ಸೇನೆನಿ 2005, ದಿನಾಂಕಃ 19–11–2005 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ ಮಮ ಇ 65 ಪಿ ಹೆಚ್ ಪಿ 2010, ದಿನಾಂಕ 18.02.2011 ರಂತೆ ಜಿಲ್ಲಾ ಮಟ್ಟದ ಸಕ್ಷಮ ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೆ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.

**14. ವಿಶೇಷ ಸೂಚನೆಗಳು :** ಅಪೂರ್ಣವಾಗಿ ಭರ್ತಿ ಮಾಡಿದ ಅರ್ಜಿ, ಅಪೂರ್ಣವಾದ ಭಾವ ಚಿತ್ರ ಹಾಗೂ ಅಪೂರ್ಣವಾದ ಸಹಿಯೊಂದಿಗೆ upload ಮಾಡಿದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ

